ಶ್ರೀ ಚೆನ್ನಿಗಪ್ಪ (ರೇಷ್ಮೆ ಸಚಿವರು)

ಅ) ಅಂತಹ ಪರಿಸ್ಥಿತಿ ಇಲ್ಲ

ಆ) ಉದ್ಭವಿಸುವುದಿಲ್ಲ.

419(909) : ಶ್ರೀ ಧ್ರುವ ನಾರಾಯಣ ಆರ್ (ಸಂತೇಮರಹಳ್ಳಿ) : ಮಾನ್ಯ ಪಶುಸಂಗೋಪನೆ ಮತ್ತು ವಕ್ಫ್ ಖಾತೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸಂತೇಮರಹಳ್ಳಿ ಕ್ಷೇತ್ರದ ವ್ಯಾಪ್ತಿಯಲ್ಲಿ ಜಾನುವಾರಗಳ ಸಂಖ್ಯೆಗೆನುಗುಣವಾಗಿ ಪಶು ಚಿಕಿತ್ಸಾ ಕೇಂದ್ರಗಳಿಲ್ಲದಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಹೆಚ್ಚಿನ ಪಶು ಚಿಕಿತ್ಸಾ ಕೇಂದ್ರಗಳನ್ನು ಸ್ಥಾಪಿಸುವ ಉದ್ದೇಶ ಸರ್ಕಾರದ ಮುಂದಿದೆಯೇ;

ಇ) ಇದ್ದರೆ, ಈ ಬಗ್ಗೆ ಏಂದು ಕ್ರಮ ಕೈಗೊಳ್ಳಲಾಗುವುದು ?

ಶ್ರೀ ಮಿರಾಜುದ್ದೀನ್ ಎನ್. ಪಟೇಲ್ (ಪಶುಸಂಗೋಪನೆ ಮತ್ತು ವಕ್ಫ್ ಖಾತೆ ಸಚಿವರು)

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

420(921) : ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಜಿಲ್ಲೆಯ ಆರ್ಥಿಕ ಉನ್ನತಿಯ ಉದ್ದೇಶದಿಂದ ವಾರಾಹಿ ನೀರಾವರಿ ಯೋಜನೆಯ ಅನುಷ್ಠಾನದ ಆಧಾರದಲ್ಲಿ ಆರಂಭಿಸಲಾದ ಬ್ರಹ್ಮವಾರ ಸಕ್ಕರೆ ಕಾರ್ಖಾನೆಯನ್ನು ಮುಚ್ಚಲು ಸರ್ಕಾರ ಉದ್ದೇಶಿಸಿದೆಯೇ;

ಆ) ಕೊರತೆಯಿಂದಾಗಿ ಬ್ರಹ್ಮಾವರ ಸಕ್ಕರೆ ಕಾರ್ಖಾನೆ ಮುಚ್ಚುವ ಪರಿಸ್ಥಿತಿಗೆ ಬಂದಿರುವುದರಿಂದ ವರಾಹಿ ನೀರಾವರಿ ಯೋಜನೆಗೆ ಚಾಲನೆ ಕೊಟ್ಟು ರೈತರ ಪಾಲಿಗೆ ಇರುವ ಏಕೈಕ ಸಕ್ಕರೆ ಕಾರ್ಖಾನೆಯನ್ನು ಪುನಃಶ್ಚೇತನಗೊಳಿಸಿ ಉಳಿಸಿಕೊಳ್ಳಲಾಗುವುದೇ;

ಇ) ರೈತರು ಕಾರ್ಖಾನೆಗೆ ಪೂರೈಸಿದ ಕಬ್ಬು ಎಷ್ಟು ಹಣ ಪಾವತಿಸಲು ಬಾಕಿ ಇದೆ ಹಾಗೂ ಯಾವಾಗ ಪಾವತಿಸಲಾಗುವುದು; (ವರ್ಷಾವಾರು ವಿವರ ನೀಡುವುದು)

ಈ) ಸಕ್ಕರೆ ಕಾರ್ಖಾನೆ ಮುಚ್ಚುವುದೇ ಅದಲ್ಲಿ ಕಾರ್ಖಾನೆಯಲ್ಲಿ ಕೆಲಸ ಮಾಡುತ್ತಿರುವ ನೌಕರರಿಗೆ ಬದಲಿ ವ್ಯವಸ್ಥೆಯನ್ನು ಕಲ್ಪಿಸಲಾಗುವುದೇ;

ಉ) ಹಾಗಿದ್ದಲ್ಲಿ ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಆರ್.ವಿ. ದೇಶಪಾಂಡೆ (ಸಹಕಾರ ಸಚಿವರು)

ಅ) ಈ ಕಾರ್ಖಾನೆಯು ಮುಚ್ಚಲು ಯಾವುದೇ ಅಂತಹ ಪ್ರಸ್ತಾವನೆ ಸಧ್ಯಕ್ಕೆ ಪರಿಶೀಲ್ಲನೆಯಲ್ಲಿ ಇರುವುದಿಲ್ಲ.

ಆ) ಈ ಕಾರ್ಖಾನೆಯ ಪುನಶ್ಚೇತನದ ಬಗ್ಗೆ ಸೂಕ್ತ ಸಲಹೆ ನೀಡಲು ಜಿಲ್ಲಾಧಿಕಾರಿಗಳು ಉಡುಪಿ ಇವರ ಅಧ್ಯಕ್ಷತೆಯಲ್ಲಿ ಒಂದು ಉನ್ನತ ಮಟ್ಟದ ಸಮಿತಿಯನ್ನು ರಚಿಸಿದ್ದು, ಈ ಸಮಿತಿಯು ಸರ್ಕಾರಕ್ಕೆ ವರದಿ ಸಲ್ಲಿಸಿದುದ, ಅದು ಸರ್ಕಾರದ ಪರಿಶೀಲನೆಯಲ್ಲಿದೆ.

ಕಾರ್ಖಾನೆಯು ರೂ. 312.00 ಲಕ್ಷ ಹಣವನ್ನು ಕಬ್ಬು ಪೂರೈಕೆ ಮಾಡಿದ ರೈತರಿಗೆ ಪಾವತಿಸಲು ಬಾಕಿ ಇರುತ್ತದೆ. ಈ ಬಾಕಿಯ ವರ್ಷಾವಾರು ವಿವರ ಈ ಕೆಳಗಿನಂತಿದೆ.